ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 25/8/20

ವೇಳೆಗೆ ನಿರ್ಧಾರವಾಗಲಿದೆ ಎಂದು ಹೇಳಿದರು.

# ವಿಧಾನಸೌಧದಲ್ಲೇ ಅಧಿವೇಶನ

## ಸಾರ್ವಜನಿಕರಿಗಿಲ್ಲ ಪ್ರವೇಶ ■ ಸೀಟುಗಳ ಮಧ್ಯೆ ಗಾಜಿನ ಪರದೆ

ಬೆಂಗಳೂರು: ವಿಧಾನಸೌಧದಲ್ಲೇ ವಿಧಾನಮಂಡಲ ಅಧಿವೇಶನ ನಡೆಸಲು ತೀರ್ಮಾನಿಸಲಾಗಿದ್ದು, ಕೊರೊನಾ ಹಿನ್ನೆಲೆಯಲ್ಲಿ ಅಂತರ ಕಾಯ್ದುಕೊಳ್ಳಲು ಪ್ರತಿ ಎರಡು ಆಸನದ ಮಧ್ಯೆ ಫೈಬರ್ ಗ್ಲಾಸ್ ಪರದೆ ಅಳವಡಿಸಲು ನಿರ್ಧರಿಸಲಾಗಿದೆ.

ಅಧಿವೇಶನ ನಡೆಸುವ ಸಂಬಂಧ ಸೋಮವಾರ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರ ಜತೆ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ, ಬೆಂಗಳೂರಿನಲ್ಲೇ ಮಳೆಗಾಲದ ಅಧಿವೇಶನ ನಡೆಸಲು ಸರ್ಕಾರ ತೀರ್ಮಾನ ಮಾಡಿದೆ. ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಎಲ್ಲ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಎಪ್ಪತ್ತು ವರ್ಷ ಮೇಲ್ಪಟ್ಟವರು ಸದನದಲ್ಲಿ ಭಾಗವಹಿಸಬೇಕಾ, ಬೇಡವೇ ಎಂಬುದರ ಬಗ್ಗೆ ಸದ್ಯದಲ್ಲೇ ಸ್ಪೀಕರ್ ನಿರ್ಧರಿಸಲಿದ್ದಾರೆ ಎಂದು ತಿಳಿಸಿದರು.

ಸೆ.21 ರಿಂದ 30ರವರೆಗೂ ಅಧಿವೇಶನ ನಡೆಯಲಿದೆ. ಎರಡು ಆಸನಗಳ ನಡುವೆ ಗಾಜಿನ ಪರದೆ ಹಾಕಲಾಗುತ್ತದೆ. ಪ್ರತಿ ಸದಸ್ಯರಿಗೆ ಫೇಸ್ ಶೀಲ್ಡ್, ಮಾಸ್ಕ್ , ಸ್ಯಾನಿಟೈಸರ್ ವ್ಯವಸ್ಥೆ ಮಾಡಲಾಗುವುದು ಎಂದು ಹೇಳಿದರು.



ವಿಧಾನಸಭೆಯಲ್ಲಿ ಸೋಮವಾರ ಪರಿಶೀಲನೆ ನಡೆಸಿದ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ಸಚಿವ ಮಾಧುಸ್ವಾಮಿ ಮತ್ತು ಸಿಎಸ್ ವಿಜಯ ಭಾಸ್ಕರ್.